ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.
ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 14-04-2016

## ಪತ್ರಿಕಾ ಪ್ರಕಟಣೆ

# ಬರ: ಮುಖ್ಯಮಂತ್ರಿಗಳಿಂದ ಜಿಲ್ಲೆಗಳಿಗೆ ಪ್ರವಾಸ

**ಬೆಂಗಳೂರು, ಏಪ್ರಿಲ್ 14 (ಕರ್ನಾಟಕ ವಾರ್ತೆ) :** ತೀವ್ರ ಬರಗಾಲಕ್ಕೆ ತುತ್ತಾಗಿರುವ ಜಿಲ್ಲೆಗಳಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಾಳೆಯಿಂದ (ಏ. 15, ಶುಕ್ರವಾರ) ಪ್ರವಾಸ ಕೈಗೊಳ್ಳಲಿದ್ದಾರೆ.

ಮೊದಲ ಹಂತದಲ್ಲಿ ಬೀದರ್, ಗುಲ್ಬರ್ಗ, ರಾಯಚೂರು, ಯಾದಗಿರಿ, ವಿಜಯಪುರ ಮತ್ತು ಬಾಗಲಕೋಟ ಜಿಲ್ಲೆಗಳಿಗೆ ಭೇಟಿ ನೀಡಲಿದ್ದಾರೆ.

ಶುಕ್ರವಾರ ಬೆಳಗ್ಗೆ ಬೀದರ್‌ಗೆ ಭೇಟಿ ನೀಡುವ ಮುಖ್ಯಮಂತ್ರಿಗಳು, ಬರ ಪರಿಸ್ಥಿತಿ ತೀವ್ರವಾಗಿರುವ ತಾಲೂಕುಗಳಿಗೆ ಭೇಟಿ ಕೊಟ್ಟು ಪರಿಹಾರ ಕಾಮಗಾರಿಗಳನ್ನು ವೀಕ್ಷಿಸುವರು. ಬಳಿಕ ಜಿಲ್ಲೆಯ ಅಧಿಕಾರಿಗಳ ಸಭೆ ನಡೆಸಿ ಪ್ರಗತಿ ಪರಿಶೀಲಿಸುವರು.

ಬಳಿಕ ಗುಲ್ಬರ್ಗ ಜಿಲ್ಲೆಗೆ ತೆರಳುವ ಮುಖ್ಯಮಂತ್ರಿಗಳು ಗ್ರಾಮಗಳಿಗೆ, ಮೇವು ಬ್ಯಾಂಕ್ ಮತ್ತು ಗೋಶಾಲೆಗಳಿಗೆ ಭೇಟಿ ನೀಡುವರು. ಅಲ್ಲಿಯೂ ಪರಿಶೀಲನಾ ಸಭೆ ನಡೆಸುವರು.

ಶುಕ್ರವಾರ ರಾತ್ರಿ ಗುಲ್ಬರ್ಗದಲ್ಲಿ ವಾಸ್ತವ್ಯ ಹೂಡುವ ಮುಖ್ಯಮಂತ್ರಿಗಳು, ಶನಿವಾರ ಯಾದಗಿರಿ ಮತ್ತು ರಾಯಚೂರು ಜಿಲ್ಲೆಗಳಿಗೆ ಭೇಟಿ ನೀಡಲಿದ್ದಾರೆ.

ಭಾನುವಾರ ರಾತ್ರಿ ವಿಜಯಪುರದಲ್ಲಿ ವಾಸ್ತವ್ಯ ಹೂಡುವ ಅವರು, ಸೋಮವಾರ ಆ ಜಿಲ್ಲೆಯ ಬರ ಪೀಡಿತ ಪ್ರದೇಶಗಳಿಗೆ ಭೇಟಿ ನೀಡುವರು. ಅದೇ ದಿನ ಬಾಗಲಕೋಟ ಜಿಲ್ಲೆಗೆ ಭೇಟಿ ಕೊಟ್ಟು, ರಾತ್ರಿ ಬೆಂಗಳೂರಿಗೆ ವಾಪಸ್ಸಾಗುವರು.

ತೀವ್ರ ಬರಗಾಲಕ್ಕೆ ತುತ್ತಾಗಿರುವ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳೊಂದಿಗೆ ಮುಖ್ಯಮಂತ್ರಿಗಳು ಇತ್ತೀಚೆಗೆ ವೀಡಿಯೊ ಸಂವಾದ ನಡೆಸಿದ್ದರು.

ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ತಿಂಗಳಲ್ಲಿ ಎರಡು ದಿನ ಬರ ಪೀಡಿತ ಜಿಲ್ಲೆಗಳಿಗೆ ಭೇಟಿ ನೀಡಬೇಕು. ಸ್ಥಳೀಯ ಶಾಸಕರನ್ನು ಭೇಟಿಯಾಗಿ ಸಮಾಲೋಚಿಸಬೇಕು. ಬರ ಪರಿಹಾರ ಕಾಮಗಾರಿಗಳ ಪ್ರಗತಿ ಪರಿಶೀಲಿಸಬೇಕು. ಯಾವುದೇ ತೊಡಕು ಕಂಡು ಬಂದರೆ ಸಂಬಂಧ ಪಟ್ಟ ಇಲಾಖೆಗಳ ಪ್ರಧಾನ ಕಾರ್ಯದರ್ಶಿಗಳ ಜೊತೆ ಚರ್ಚಿಸಿ ಸಮಸ್ಯೆ ನಿವಾರಿಸಬೇಕು. ಮೇವು ಬ್ಯಾಂಕ್, ಗೋಶಾಲೆಗಳ ಸ್ಥಿತಿಗತಿ ಕುರಿತು ಪರಾಮರ್ಶಿಸಬೇಕು ಎಂದು ಮುಖ್ಯಮಂತ್ರಿಗಳು ಸೂಚನೆ ನೀಡಿದ್ದಾರೆ.

ಕುಡಿಯುವ ನೀರು ಪೂರೈಸುವಲ್ಲಿ, ಜಾನುವಾರುಗಳಿಗೆ ನೀರು ಮತ್ತು ಮೇವು ಒದಗಿಸುವಲ್ಲಿ ಯಾವುದೇ ಲೋಪವಾಗಬಾರದು ಎಂದು ತಾಕೀತು ಮಾಡಿದ್ದಾರೆ.

ಕುಡಿಯುವ ನೀರು ಪೂರೈಕೆಗಾಗಿ ಸರ್ಕಾರ ಈಗಾಗಲೇ ಪ್ರತಿ ವಿಧಾನಸಭೆ ಕ್ಷೇತ್ರಕ್ಕೆ 50 ಲಕ್ಷ ರೂ. ಬಿಡುಗಡೆ ಮಾಡಿದೆ. 70 ಮೇವು ಬ್ಯಾಂಕ್ ಮತ್ತು 11 ಕಡೆ ಗೋ ಶಾಲೆಗಳನ್ನು ತೆರೆಯಲಾಗಿದೆ. 2015-16ನೇ ಸಾಲಿನಲ್ಲಿ ಕುಡಿಯುವ ನೀರು ಪೂರೈಸುವ ಉದ್ದೇಶಕ್ಕಾಗಿ 275 ಕೋಟಿ ರೂ. ಬಿಡುಗಡೆ ಮಾಡಿದ್ದು 175 ಕೋಟಿ ರೂ. ವೆಚ್ಚವಾಗಿದೆ. ಇತ್ತೀಚೆಗೆ 30 ಕೋಟಿ ರೂ. ಮಂಜೂರು ಮಾಡಲಾಗಿದೆ. ಬರ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಪರಿಸ್ಥಿತಿ ಬಗ್ಗೆ ಅಧ್ಯಯನ ನಡೆಸಲು ಸಚಿವ ಸಂಪುಟದ ನಾಲ್ಕು ಉಪ ಸಮಿತಿಗಳನ್ನೂ ಮುಖ್ಯಮಂತ್ರಿಯವರು ರಚಿಸಿದ್ದಾರೆ.

# ಡಾ. ಬಿ.ಆರ್. ಅಂಬೇಡ್ಕರ್ ಮನುಕುಲದ ನಾಯಕ : ಸಿದ್ದರಾಮಯ್ಯ

**ಬೆಂಗಳೂರು, ಏಪ್ರಿಲ್ 14 (ಕರ್ನಾಟಕ ವಾರ್ತೆ)**

ಅಂಬೇಡ್ಕರ್ ಅವರು ದಲಿತ ನಾಯಕರಲ್ಲ. ಇಡೀ ದೇಶದ ನಾಯಕರು. ಮನುಕುಲದ ನಾಯಕರು. ಹೀಗಾಗಿ, ಇಡೀ ವಿಶ್ವವೇ ಅವರನ್ನು ಸ್ಮರಿಸುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಇಲ್ಲಿ ತಿಳಿಸಿದರು.

ಸಂವಿಧಾನಶಿಲ್ಪಿ ಬಾಬಾಸಾಹೇಬ್ ಡಾ. ಬಿ. ಆರ್. ಅಂಬೇಡ್ಕರ್ ಅವರ 125ನೇ ಜನ್ಮ ದಿನಾಚರಣೆ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಮುಖ್ಯಮಂತ್ರಿಗಳು 2016 ಅನ್ನು ಅಂಬೇಡ್ಕರ್ ಅವರ ವರ್ಷ ಎಂದು ಆಚರಿಸಲು ಸರ್ಕಾರ ಎಲ್ಲಾ ಸಿದ್ಧತೆಗಳನ್ನು ಮಾಡಿಕೊಂಡಿದೆ. ವಿಧಾನ ಸೌಧದ ಮುಂಭಾಗದಲ್ಲಿ ನಿರ್ಮಾಣಗೊಳ್ಳುತ್ತಿರುವ ಮೆಟ್ರೋ ಸ್ಟೇಷನ್‌ಗೆ 'ಅಂಬೇಡ್ಕರ್ ಮೆಟ್ರೋ ಸ್ಟೇಷನ್' ಎಂದು ಹೆಸರಿಸಲಾಗುವುದು. ಬೆಂಗಳೂರಿನ ಯಶವಂತಪುರ ರೈಲು ನಿಲ್ದಾಣಕ್ಕೆ 'ಅಂಬೇಡ್ಕರ್ ರೈಲ್ವೆ ನಿಲ್ದಾಣ' ಎಂದು ಹೆಸರಿಡಲು ಕೇಂದ್ರಕ್ಕೆ ಮನವಿ ಮಾಡಲಾಗುವುದು ಎಂದು ತಿಳಿಸಿದರು.

ಅಂಬೇಡ್ಕರ್ ಅವರು ಗೌತಮ ಬುದ್ಧ ಅವರಿಂದ ಪ್ರೇರಣೆ ಹೊಂದಿದವರಾಗಿದ್ದರು. ಹಾಗೆಯೇ, ಶೋಷಿತರಿಗೆ ಅಂಬೇಡ್ಕರ್ ಪ್ರೇರಣೆಯಾಗಿದ್ದಾರೆ. ದೇಶದಲ್ಲಿ ಅಂಬೇಡ್ಕರ್ ಅವರು ಅನ್ಯಾಯದ ವಿರುದ್ಧ ಚಳವಳಿ ನಡೆಸದಿದ್ದರೆ, ಈ ದೇಶದಲ್ಲಿ ಚಳವಳಿಗಳೇ ಹುಟ್ಟುತ್ತಿರಲಿಲ್ಲ. ನಮ್ಮ ಸರ್ಕಾರ ಇಂದು ಅಹಿಂದ ಪರವಾಗಿ ಕೆಲಸ ಮಾಡುತ್ತಿದ್ದರೆ ಅದಕ್ಕೆ ಅಂಬೇಡ್ಕರ್ ಅವರೇ ಸ್ಫೂರ್ತಿ ಎಂದರು.

ಅಂಬೇಡ್ಕರ್ ಅವರು ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಿದ್ದರು. ಈ ಹಿನ್ನೆಲೆಯಲ್ಲಿ ನಮ್ಮ ಸರ್ಕಾರವು ದಿ. ಬಸವಲಿಂಗಪ್ಪ ಹೆಸರಿನಲ್ಲಿ ಬೆಂಗಳೂರು ವಿಶ್ವ ವಿದ್ಯಾನಿಲಯದಲ್ಲಿ ಅಧ್ಯಯನ ಪೀಠ ಪ್ರಾರಂಭಿಸಲು ಕ್ರಮ ಕೈಗೊಳ್ಳುತ್ತಿದೆ. ಜೊತೆಗೆ, ಬೆಂಗಳೂರಿನಲ್ಲಿ ಅಂಬೇಡ್ಕರ್ ಹೆಸರಿನಲ್ಲಿ ಅಂಬೇಡ್ಕರ್ ಲಂಡನ್ ಸ್ಕೂಲ್ ಆಫ್ ಎಕನಾಮಿಕ್ಸ್ ಅನ್ನು ಬೆಂಗಳೂರಿನಲ್ಲಿ ಪ್ರಾರಂಭಿಸಲು ಸರ್ಕಾರ ಗಂಭೀರವಾಗಿ ಚಿಂತಿಸುತ್ತಿದೆ ಎಂದು ಮುಖ್ಯಮಂತ್ರಿಗಳು ಹೇಳಿದರು.

2016 ಅನ್ನು ಅಂಬೇಡ್ಕರ್ ಅವರ ವರ್ಷ ಎಂದು ಘೋಷಿಸುತ್ತಿರುವ ಹಿನ್ನೆಲೆಯಲ್ಲಿ ವಾರ್ತಾ ಇಲಾಖೆ ವತಿಯಿಂದ ಅಂಬೇಡ್ಕರ್ ಕುರಿತಂತೆ 'ಧ್ವನಿ-ಬೆಳಕು' ಕಾರ್ಯಕ್ರಮ, ವಿಚಾರ ಸಂಕಿರಣ, ಛಾಯಾಚಿತ್ರ ಪ್ರದರ್ಶನ, ಕಮ್ಮಟಗಳನ್ನು ಆಯೋಜಿಸಲಾಗುವುದು. ಹಾಗೆಯೇ, ಸಮಾಜ ಕಲ್ಯಾಣ ಇಲಾಖೆಯಿಂದ ಅಂಬೇಡ್ಕರ್ ಕುರಿತಂತೆ ಅರಿವು ಮೂಡಿಸುವ ಕೆಲಸವನ್ನು ಮಾಡಲಾಗುವುದು ಎಂದು ನುಡಿದರು.

ಅಂಬೇಡ್ಕರ್ ತತ್ವ ಮತ್ತು ಸಿದ್ಧಾಂತಗಳನ್ನು ನಾವೆಲ್ಲರೂ ಅಳವಡಿಸಿಕೊಳ್ಳಬೇಕು. ಅಂಬೇಡ್ಕರ್ ಅವರು ಮೂರ್ತಿ ಪೂಜಕರಾಗಿರಲಿಲ್ಲ. ಓಟು ಚಲಾಯಿಸುವ ಹಕ್ಕನ್ನು ಕೆಳವರ್ಗದವರಿಗೆ ನೀಡುವಲ್ಲಿ ಅಂಬೇಡ್ಕರ್ ಅವರ ಪಾತ್ರ ಅತ್ಯಂತ ಮಹತ್ವವಾದುದು. ದಲಿತರಲ್ಲಿ ಒಗ್ಗಟು ಇರಬೇಕು. ಇದರಿಂದ ಯಾವುದೇ ಕೆಲಸದಲ್ಲಿ ಯಶಸ್ವಿಯಾಗಬಹುದು ಮತ್ತು ಏನುಬೇಕಾದರೂ ಸಾಧಿಸಬಹುದು ಎಂದು ಸಂಸದ ಮಲ್ಲಿಕಾರ್ಜುನ ಖರ್ಗೆ ಅವರು ತಿಳಿಸಿದರು.

ಸಮಾಜ ಕಲ್ಯಾಣ ಸಚಿವ ಹೆಚ್ ಆಂಜನೇಯ ಅವರು ಪ್ರಸ್ತಾವಿಕವಾಗಿ ಮಾತನಾಡಿದರು. ವಿಧಾನಪರಿಷತ್ ಸಭಾಪತಿ ಡಿ.ಹೆಚ್. ಶಂಕರಮೂರ್ತಿ, ಖ್ಯಾತ ಕವಿ, ಅಂಬೇಡ್ಕರ್ ಪ್ರಶಸ್ತಿ ಆಯ್ಕೆ ಸಮಿತಿಯ ಅಧ್ಯಕ್ಷರಾದ ಡಾ. ಸಿದ್ದಲಿಂಗಯ್ಯ ಡಾ. ಚಿನ್ನಸ್ವಾಮಿ ಮಾಂಬಳಿ ಅವರುಗಳು ಮಾತನಾಡಿದರು.

ಲೋಕೋಪಯೋಗಿ ಸಚಿವ ಡಾ. ಹೆಚ್. ಸಿ. ಮಹದೇವಪ್ಪ, ವಿಧಾನ ಪರಿಷತ್ ಸದಸ್ಯ ಐವಾನ್ ಡಿಸೋಜಾ, ಶಾಸಕ ನರೇಂದ್ರ ಸ್ವಾಮಿ, ಅಂಬೇಡ್ಕರ್ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಶ್ರೀಮತಿ ಮಲ್ಲಾಜಮ್ಮ, ಲಿಡ್ಕರ್ ಸಂಸ್ಥೆಯ ಅಧ್ಯಕ್ಷ ರಾಮಕೃಷ್ಣ, ತಾಂಡಾ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಜಲಜಾ ನಾಯಕ್, ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಶ್ರೀಮತಿ ಬಲ್ಕಿಸ್ ಬಾನು, ಸಮಾಜ ಕಲ್ಯಾಣ ಇಲಾಖೆಯ ಕಾರ್ಯದರ್ಶಿ ಗಂಗಾರಾಮ್ ಬಡೇರಿಯಾ, ಸಮಾಜ ಕಲ್ಯಾಣ ಇಲಾಖೆಯ ಸಲಹೆಗಾರ ವೆಂಕಟಯ್ಯ ಸೇರಿದಂತೆ ಮುಂತಾದವರು ಭಾಗವಹಿಸಿದ್ದರು.

ಪ್ರಶಸ್ತಿ ಪ್ರದಾನ: ಪರಿಶಿಷ್ಟ ಜಾತಿ ಮತ್ತು ವರ್ಗಗಳ ಶ್ರೇಯೋಭಿವೃದ್ಧಿಗಾಗಿ ಸಲ್ಲಿಸಿರುವ ಗಮನಾರ್ಹ ಸೇವೆಯನ್ನು ಪರಿಗಣಿಸಿ ಪ್ರಸಕ್ತ ಸಾಲಿನಲ್ಲಿ ನೀಡುವ ಡಾ. ಅಂಬೇಡ್ಕರ್ ಪ್ರಶಸ್ತಿಯನ್ನು ಡಾ. ಎಸ್. ಚಿನ್ನಸ್ವಾಮಿ ಮಾಂಬಳ್ಳಿ ಅವರಿಗೆ ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರು ವಿಧಾನ ಸೌಧದ ಬ್ಯಾಂಕ್ವೆಂಟ್ ಹಾಲ್ ನಲ್ಲಿ ಪ್ರದಾನ ಮಾಡಿದರು

ಪುಸ್ತಕ ಬಿಡುಗಡೆ : ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ ಹೊರತಂದಿರುವ 'ಮಹಾ ಮಾನವತಾವಾದಿ ಡಾ. ಬಿ.ಆರ್. ಅಂಬೇಡ್ಕರ್' ಕಿರುಹೊತ್ತಿಗೆಯನ್ನು ಇದೇ ಸಂದರ್ಭದಲ್ಲಿ ಮುಖ್ಯಮಂತ್ರಿಗಳು ಬಿಡುಗಡೆ ಮಾಡಿದರು.

ಛಾಯಾಚಿತ್ರ ಪ್ರದರ್ಶನ: ಅಂಬೇಡ್ಕರ್ ಅವರ ಬಗ್ಗೆ ಕಿರುಪರಿಚಯ ಮಾಡಿಕೊಡುವ ಅಪರೂಪದ ಛಾಯಾಚಿತ್ರ ಪ್ರದರ್ಶನವನ್ನು ಮುಖ್ಯಮಂತ್ರಿಗಳು ಉದ್ಘಾಟಿಸಿದರು.

ಪ್ರತಿಮೆಗೆ ಮಾಲಾರ್ಪಣೆ: ಇದಕ್ಕೂ ಮುನ್ನ ವಿಧಾನಸೌಧದ ಮುಂಭಾಗದಲ್ಲಿರುವ ಅಂಬೇಡ್ಕರ್ ಪ್ರತಿಮೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂಥೆ ಸಚಿವರು, ಶಾಸಕರು ಮಾಲಾರ್ಪಣೆ ಮಾಡುವ ಮೂಲಕ ಗೌರವ ಸಲ್ಲಿಸಿದರು.

**ಕೆಪಿಎಸ್:**

# ದೆಹಯಲಿಯಲ್ಲಿ ಪಂಡಿತ್ ವೆಂಕಟೇಶ್ ಕುಮಾರ್ ಅವರಿಂದ ಹಿಂದೂಸ್ತಾನಿ ಸಂಗೀತ ನಾದಲೀಲೆ

**ನವದೆಹಲಿ. ಏ. 14 ( ಕರ್ನಾಟಕ ವಾರ್ತೆ) :** ಕರ್ನಾಟಕದ ಖ್ಯಾತ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ ಗಾಯಕರು ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರಾದ ಪಂಡಿತ ವೆಂಕಟೇಶ್ ಕುಮಾರ ಅವರು ದೆಹಲಿಯಲ್ಲಿ ನೀಡಿದ ಹಿಂದುಸ್ತಾನಿ ಸಂಗೀತದ ನಾದಲೀಲೆಯು ದೆಹಲಿ ಕನ್ನಡಿಗರು, ಕನ್ನಡೇತರರಿಗೆ ಸಂಗೀತದ ರಸದೌತಣವನ್ನು ಉಣಬಡಿಸಿತು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ನವದೆಹಲಿಯಲ್ಲಿ ಹಮ್ಮಿಕೊಂಡಿದ್ದ ಶಾಸ್ತ್ರೀಯ ಸಂಗೀತ ಕಾರ್ಯಕ್ರಮದಲ್ಲಿ ಪಂಡಿತ್ ವೆಂಟಕೇಶ್ ಅವರ ಶಾಸ್ತ್ರೀಯ ಸಂಗೀತ, ಕನಕದಾಸರ ವಿರಚಿತ ಗೀತೆಯಾದ, ತೊರೆದು ಬೀವಿಸಬಹುದೇ ಹರಿ ನಿನ್ನ ಚರಣಗಳ. ಸಾಮಾಜಿಕ ಸಾಮರಸ್ಯ ಸಂದೇಶವನ್ನು ಸಾರುವ ವಚನ ಗೀತೆಗಳನ್ನು ಹಾಡಿ ಸಭೀಕರನ್ನು ಸಮ್ಮೋಹನಗಳಿಸಿದರು.

ಪಂಡಿತ್ ವೆಂಕಟೇಶ್ ಕುಮಾರ್ ಅವರಿಗೆ ತಬಲಾ , ಹಾರ್ಮೋನಿಯಂ ಧ್ವನಿಗೆ ಸೇರಿದಂತೆ ಸಹಕಲಾವಿದರು ಸ್ವರಕ್ಕೆ ತಕ್ಕಂತೆ ನಾದವನ್ನು ಬೆಸೆದರು. ಪಂಡಿತ್ ವೆಂಕಟೇಶ್ ಕುಮಾರ್ ಅವರ ಭಾವಾನಾತ್ಮಕ ಗಾಯನಕ್ಕೆ ಪ್ರೇಕ್ಷಕರು ಧ್ವನಿಗೂಡಿಸಿ, ಆನಂದಿಸಿದರು. ಕೊನೆಗೆ ಸ್ಮರಣೆ ಸಾಲದೇ ಬೈರವಿ ರಾಘದೊಂದಿಗೆ ಮುಕ್ತಾಯಗೊಂಡಿತು.

ದಿ ವೀಕ್ ಪತ್ರಿಕೆಯ ಸ್ಥಾನಿಕ ಸಂಪಾದಕರಾದ ಶ್ರೀ ಕೆ.ಎಸ್. ಸಚ್ಚಿದಾನಂದ ಮೂರ್ತಿ ಅವರು ಮಾತನಾಡಿ, ಗದುಗಿನ ವೀರೇಶ್ವರ ಮಠದ ಪುಟ್ಟರಾಜಗವಾಯಿಗಳ ಆಶ್ರಯದಲ್ಲಿ ಬೆಳೆದ ಪಂಡಿತ ವೆಂಕಟೇಶ್ ಕುಮಾರ್ ಗುರುಗಳ ಮಾರ್ಗದಲ್ಲಿ ಮುನ್ನಡೆಯುತ್ತಿದ್ದಾರೆ. ಅವರಿಗೆ ಮತ್ತಷ್ಟು ಕೀರ್ತಿ ಪತಾಕೆಯು ದೊರಕಲಿ ಎಂದು ಆಶಿಸಿದರು.

ಕರ್ನಾಟಕ ಭವನದ ನಿವಾಸಿ ಆಯುಕ್ತರಾದ ಶ್ರೀ ಅತುಲ್ ಕುಮಾರ್ ತಿವಾರಿ ಅವರು ಪಂಡಿತ್ ವೆಂಟಕೇಶ್ ಕುಮಾರ್ ಅವರನ್ನು ಸನ್ಮಾನಿಸಿದರು. ಉಪನಿವಾಸಿ ಆಯುಕ್ತರಾದ ಶ್ರೀಮತಿ ಅನೀಸ್ ಕೆ. ಜಾಯ್, ಸಾಹಿತಿ ಪ್ರೊ. ಎಚ್.ಎಸ್. ಶಿವಪ್ರಕಾಶ್, ಪ್ರೊ. ಪುರುಶೋತ್ತಮ ಬಿಳಿಮಲೆ, ಹಿರಿಯ ಪತ್ರಕರ್ತ ಶ್ರೀ ಡಿ. ಉಮಾಪತಿ, ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಶ್ರೀ ಎಸ್.ವಿ. ರಾಜೇಂದ್ರ ಸಿಂಗ್ ಬಾಬು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಉಪನಿರ್ದೇಶಕ ಶ್ರೀ ಹೆಚ್. ಬಿ. ದಿನೇಶ್, ದೆಹಲಿ ಕರ್ನಾಟಕ ಸಂಘದ ಅಧ್ಯಕ್ಷರಾದ ಶ್ರೀ ವಸಂತ ಶೆಟ್ಟಿ ಬೆಳ್ಳಾರೆ, ಕಾರ್ಯದರ್ಶಿ ಶ್ರೀ ಸಿ.ಎಂ. ನಾಗರಾಜ್ ಉಪಸ್ಥಿತರಿದ್ದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಶ್ರೀ ಎನ್.ಆರ್. ವಿಶುಕುಮಾರ್ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ವಾರ್ತಾಧಿಕಾರಿ ಹೆಚ್. ಶ್ರೀನಿವಾಸ ವಂದಿಸಿದರು. ಎಸ್. ಕೃಷ್ಣ ಭಟ್ ನಿರೂಪಿಸಿದರು.

***

# ಬಾಬಾಸಾಹೇಬ್ ಡಾ. ಬಿ.ಆರ್.ಅಂಬೇಡ್ಕರ್ ಅವರ 125ನೇ ಜನ್ಮದಿನಾಚರಣೆ ಹಾಗೂ ಪ್ರಶಸ್ತಿ ಪ್ರಧಾನ ಸಮಾರಂಭವನ್ನು ಉದ್ಘಾಟಿಸಿ ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರು ಇಂದು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್ ನಲ್ಲಿ ಮಾಡಿದ ಉದ್ಘಾಟನಾ ಭಾಷಣದ ಮುಖ್ಯಾಂಶಗಳು:

- ಬಾಬಾಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅವರು ಭಾರತಕ್ಕೆ ಮಾತ್ರವಲ್ಲ ಇಡೀ ಮನುಕುಲಕ್ಕೇ ನಾಯಕರಾಗಿರುವವರು ಅಗಾಧವಾದ ಜ್ಞಾನಪಾಂಡಿತ್ಯದ ಜೊತೆಗೆ ವಿಚಾರವಂತಿಕೆ, ವಿವೇಕವನ್ನೂ ಹೊಂದಿದ್ದ ಅಪ್ರತಿಮ ಚೇತನ ಬಾಬಾಸಾಹೇಬ್ ಅಂಬೇಡ್ಕರ್.

- ಈ ನೆಲದಲ್ಲಿ ಅಂಬೇಡ್ಕರ್ ಹುಟ್ಟಿರದೇ ಇದ್ದಿದ್ದರೆ ನಮ್ಮೆಲ್ಲರ ಸ್ಥಿತಿ ಏನಾಗುತ್ತಿತ್ತೆಂದು ಊಹಿಸಿಕೊಳ್ಳಲೂ ಸಾಧ್ಯವಿಲ್ಲ. ನಮ್ಮ ಭಾರತ ಸಮಾಜದ ಅಮಾನವೀಯ ಜಾತಿ ವ್ಯವಸ್ಥೆಯ ಕ್ರೌರ್ಯವನ್ನು ಬಾಬಾಸಾಹೇಬರು ಸ್ವತಃ ಅನುಭವಿಸಿದ್ದರು. ನಮ್ಮ ಸಮಾಜ ವ್ಯವಸ್ಥೆಯನ್ನು ಆಳವಾಗಿ ಅರಿತು ಇಲ್ಲಿ ಆಳವಾಗಿ ಬೇರುಬಿಟ್ಟಿರುವ ಸಮಸ್ಯೆಗಳಿಗೆ ಸರಿಯಾದ ಪರಿಹಾರವನ್ನೂ ಅವರು ತಿಳಿಸಿದರು. ಬದುಕಿನುದ್ದಕ್ಕೂ ಏಕಾಂಗಿಯಾಗಿ ಹೋರಾಡಿದರು. ಜನಸಮುದಾಯಗಳನ್ನು ಹೋರಾಟದಲ್ಲಿ ತೊಡಗಿಸಿದರು.

- ಆಡು ಮುಟ್ಟದ ಸೊಪ್ಪಿಲ್ಲ ಎಂಬ ನಾಣ್ಣುಡಿಯಂತೆ ಬಾಬಾ ಸಾಹೇಬರು ಅರಿಯದ ವಿಚಾರವಿರಲಿಲ್ಲ. ರಾಜಕೀಯ ಶಾಸ್ತ್ರ, ಸಮಾಜ ಶಾಸ್ತ್ರ, ಅರ್ಥಶಾಸ್ತ್ರ, ನ್ಯಾಯ ಶಾಸ್ತ್ರ ಹೀಗೆ ಎಲ್ಲಾ ಕ್ಷೇತ್ರಗಳಲ್ಲಿ ಅವರು ಪರಿಣತಿ ಪಡೆದಿದ್ದರು. ನಾಲ್ಕು ಡಾಕ್ಟರೇಟ್ ಪದವಿಗಳನ್ನು ಪಡೆದ ಅದ್ವಿತೀಯ ಚಿಂತಕ ಬಾಬಾಸಾಹೇಬರಾಗಿದ್ದರು. ಅವರೊಬ್ಬ ಪರಿಪೂರ್ಣ ವ್ಯಕ್ತಿಯಾಗಿದ್ದರು.
- ಬಾಬಾಸಾಹೇಬರ 125ನೇ ಜನ್ಮದಿನಾಚರಣೆಯನ್ನು ಅತ್ಯಂತ ಸಂಭ್ರಮದಿಂದ ಆಚರಿಸುತ್ತಿರುವ ಈ ಹೊತ್ತಿನಲ್ಲಿ ಡಾ.ಬಿ.ಆರ್.ಆಂಬೇಡ್ಕರ್ ಅವರು ನಡೆದ ದಾರಿಯಲ್ಲಿ ನಡೆಯುವುದೇ ಅವರಿಗೆ ಸಲ್ಲಿಸುವ ನಿಜವಾದ ಗೌರವ. ಬಾಬಾಸಾಹೇಬರು ಇಡೀ ಜಗತ್ತಿನಲ್ಲಿ ಸಮಾನತೆ ಸ್ಥಾಪಿಸುವ ಕನಸು ಕಂಡಿದ್ದರು. ನಮ್ಮಂತಹ ದೇಶದಲ್ಲಿ ಸಂಪತ್ತು ಕೆಲವೇ ಶ್ರೀಮಂತರ ಕೈಯಲ್ಲಿ ಸೇರುವುದರ ಅಪಾಯದ ಬಗ್ಗೆ ಮಾತನಾಡಿದ್ದರು. ಸಂಪತ್ತಿನ ಸಮಾನ ಹಂಚಿಕೆ ಕುರಿತು ಮಾತನಾಡಿದ್ದರು.

- ಭಾರತದಲ್ಲಿ ಅನಿಷ್ಟ ಜಾತಿ ಪದ್ದತಿಯ ವಿನಾಶವಾಗಬೇಕೆಂದು ಬಯಸಿದ್ದರು. ಜಾತಿವ್ಯವಸ್ಥೆ ಇರುವವರೆಗೂ ತಳಸಮುದಾಯಗಳಿಗೆ ಮೀಸಲಾತಿ ಇರಬೇಕೆಂದು ಪ್ರತಿಪಾದಿಸಿದ್ದರು. ಈ ಜಾತಿ ವ್ಯವಸ್ಥೆ ಎನ್ನುವುದು ಮತ್ತೆ ಮತ್ತೆ ನಾನಾ ರೂಪಗಳಲ್ಲಿ ತಲೆಎತ್ತುತ್ತಲೇ ಇರುತ್ತದೆ. ಬುದ್ಧ, ಬಸವಾದಿ ಶರಣರಿಂದ ಮೊದಲಾಗಿ ಅನೇಕ ಸಮಾಜ ಸುಧಾರಕರು ಜಾತಿ ವ್ಯವಸ್ಥೆಯ ವಿರುದ್ಧ ಹೋರಾಡಿದ್ದಾರೆ. ಇದರ ವಿರುದ್ಧ ಜಾಗೃತಿ ನಿರಂತರವಾಗಿರಬೇಕು.

- ಬಾಬಾಸಾಹೇಬರು ಹತ್ತನೇ ತರಗತಿಯಲ್ಲಿ ಉತ್ತೀರ್ಣರಾದಾಗ ಅವರಿಗೆ ದೊರೆತ ಗೌತಮ ಬುದ್ಧನ ಜೀವನ ಚರಿತ್ರೆಯಿಂದ ಅವರು ಹೇಗೆ ಪ್ರೇರಣೆ ಪಡೆದಿದ್ದರೋ ಹಾಗೆ ಇಂದು ಬಾಬಾಸಾಹೇಬರೇ ನಮಗೆ ನಿಜವಾದ ಪ್ರೇರಣೆ.

- ನಮ್ಮ ಸರ್ಕಾರದ ಅಧಿಕಾರಕ್ಕೆ ಬಂದ ನಂತರ ನಾನು ನಾಲ್ಕು ಬಜೆಟ್ ಮಂಡಿಸಿದ್ದೇನೆ. ಈ ಹಿಂದಿನ ಮೂರು ಬಜೆಟ್ ಮಂಡಿಸಿದಾಗಲೂ ಅವುಗಳನ್ನು 'ಅಹಿಂದ' ಬಜೆಟ್ ಎಂದೇ ಕರೆಯಲಾಯಿತು. ಹೌದು ಅದರಲ್ಲಿ ತಪ್ಪೇನು?. ನಾವು ಅಹಿಂದ ವರ್ಗಗಳ ಬಗ್ಗೆ ಮಾತನಾಡಿದರೆ, ಅಹಿಂದ ವರ್ಗಗಳ ಪರವಾಗಿ ಕಾರ್ಯಕ್ರಮಗಳನ್ನು ರೂಪಿಸಿದರೆ ಅದಕ್ಕೆ ಪ್ರೇರಣೆ ಬಾಬಾಸಾಹೇಬ್ ಅಂಬೇಡ್ಕರ್ ಅವರೇ ಆಗಿದ್ದಾರೆ. ಇಂದು ಜನಪರವಾಗಿ, ಶೋಷಿತರ ಪರವಾಗಿ ನಡೆಯುವ ಎಲ್ಲಾ ಚಳವಳಿಗಳಿಗೂ, ಹೋರಾಟಗಳಿಗೂ ಬಾಬಾಸಾಹೇಬ್ ಅಂಬೇಡ್ಕರ್ ಅವರೇ ಪ್ರೇರಣೆಯಾಗಿದ್ದಾರೆ.

- ವಿಧಾನ ಸೌಧದ ಎದುರು ನಿರ್ಮಾಣಗೊಳ್ಳುತ್ತಿರುವ ಮೆಟ್ರೋ ರೈಲುನಿಲ್ದಾಣಕ್ಕೆ ಡಾ.ಬಿ.ಆರ್.ಅಂಬೇಡ್ಕರ್ ಅವರ ಹೆಸರನ್ನು ನಾಮಕರಣ ಮಾಡಲಾಗುವುದು.

- ಬಾಬಾಸಾಹೇಬರ ಬರಹ ಮತ್ತು ಭಾಷಣಗಳನ್ನು ಕನ್ನಡಕ್ಕೆ ತರ್ಜುಮೆಗೊಳಿಸುವ ಕಾರ್ಯ ಈಗಾಗಲೇ ನಡೆದಿದೆ. ಈಗ ಸಂವಿಧಾನ ರಚನಾ ಸಭೆಯ ವಾಗ್ವಾದಗಳನ್ನು ಸಹ ಕನ್ನಡಿಗರು ಕನ್ನಡದಲ್ಲಿ ಓದಲು ಅನುಕೂಲವಾಗುವಂತೆ ಅವುಗಳನ್ನು ಕನ್ನಡಕ್ಕೆ ತರ್ಜುಮೆಗೊಳಿಸುವ ಏರ್ಪಾಟು ಮಾಡಲಾಗುವುದು.

- ಲಂಡನ್ ಸ್ಕೂಲ್ ಆಫ್ ಎಕನಾಮಿಕ್ಸ್ ಮಾದರಿಯಲ್ಲಿ ಅಂಬೇಡ್ಕರ್ ಲಂಡನ್ ಸ್ಕೂಲ್ ಆಫ್ ಎಕನಾಮಿಕ್ಸ್ ಸ್ಥಾಪಿಸುವ ಕುರಿತು ಚಿಂತಿಸಲಾಗುವುದು.
- ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನರಲ್ಲಿ ಉದ್ಯಮಶೀಲತೆಯನ್ನು ಉತ್ತೇಜಿಸುವ ದೃಷ್ಟಿಯಿಂದ ಇದುವರೆಗೆ ಅವರಿಗೆ 2 ಕೋಟಿ ಸಾಲಸೌಲಭ್ಯ ದೊರೆಯುತ್ತಿದ್ದು ಅದನ್ನೀಗ 5 ಕೋಟಿ ರೂ.ಗೆ ಏರಿಸಲಾಗಿದೆ. ಇನ್ನು ಮುಂದೆ 10 ಕೋಟಿ ರೂ.ವರಗೆಗೂ ಸಾಲ ಸೌಲಭ್ಯ ಅವರಿಗೆ ಲಭ್ಯವಾಗಲಿದೆ. ಈ ಸಾಲ ಇನ್ನುಮುಂದೆ ವಾಣಿಜ್ಯ ಬ್ಯಾಂಕುಗಳು ಮತ್ತು ಸಹಕಾರಿ ಬ್ಯಾಂಕುಗಳಲ್ಲಿಯೂ ದೊರೆಯುವಂತೆ ಅನುಕೂಲ ಕಲ್ಪಿಸಲಾಗುತ್ತದೆ.

- ನಮ್ಮ ಸರ್ಕಾರ ಈ ವರ್ಷ ಪರಿಶಿಷ್ಟರ ಪ್ರಗತಿಗೆ ಎಸ್‌ಸಿಪಿ / ಎಸ್‌ಟಿಪಿ ಕಾಯ್ದೆ ಪ್ರಕಾರ ಬಜೆಟ್ ಅನುದಾನದಲ್ಲಿ ರೂ.19,452 ಕೋಟಿಗಳನ್ನು ಮೀಸಲಿರಿಸಿದೆ.
- ಸಾಮಾಜಿಕವಾಗಿ, ಆರ್ಥಿಕವಾಗಿ ಮತ್ತು ಶೈಕ್ಷಣಿಕವಾಗಿ ಹಿಂದುಳಿದ ಜನಸಮುದಾಯಗಳ ಏಳಿಗೆಗಾಗಿ ಪ್ರಾಮಾಣಿಕವಾಗಿ ಶ್ರಮಿಸುವ ಮೂಲಕ ಮಾತ್ರ ಬಾಬಾಸಾಹೇಬ್ ಡಾ. ಬಿ.ಆರ್.ಅಂಬೇಡ್ಕರ್ ಅವರಿಗೆ ಗೌರವ ಸಲ್ಲಿಸಬಹುದು , ಆ ನಿಟ್ಟಿನಲ್ಲಿ ನಮ್ಮ ಸರ್ಕಾರ ಯಾವತ್ತೂ ಮುಂದೆ ಎಂದು ಎಂದು ಮತ್ತೊಮ್ಮೆ ತಿಳಿಸಲಿಚ್ಛಿಸುತ್ತೇನೆ.

ಜೈ ಹಿಂದ್, ಜೈ ಭೀಮ್.